# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 18.08.2017 ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2017ನೇ ಸಾಲಿನ ಐದನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು**

**ಅನುಪಸ್ಥಿತ ಸದಸ್ಯರು:**

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

## <u>ಪ್ರಾರಂಭಿಕ</u>

1. ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ (ಪ್ರಭಾರ) ಯಾಗಿ ನೇಮಕಗೊಂಡಿರುವ ಡಾ.ದಯಾನಂದ ನಾಯ್ಕ್, ಸಹ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಸ್ವಾಗತಿಸಿದರು.

2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28(1) (ಜೆ) ಯ ಪ್ರಕಾರ ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಿಗೆ ಹಾಜರಾಗಲು ಆಗಮಿಸಿದ ಶ್ರೀ ಹೆಚ್.ದಿವಾಕರ ಶೆಟ್ಟಿ, ಪ್ರಭಾರ ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾನಿಲಯ ಮಂಗಳೂರು ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಸ್ವಾಗತಿಸಿದರು.

3. ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಗಳಿಗೆ ಹಣಕಾಸು ಅಧಿಕಾರಿಯವರ ನೆಲೆಯಲ್ಲಿ ವಿಶೇಷ ಆಹ್ವಾನಿತರಾಗಿ ಭಾಗವಹಿಸುತ್ತಿದ್ದ ಪ್ರೊ. ಶ್ರೀಪತಿ ಕಲ್ಲೂರಾಯ ಮತ್ತು ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರ ನೆಲೆಯಲ್ಲಿ ಹಾಜರಾಗುತ್ತಿದ್ದ ಶ್ರೀ ನಾಗೇಂದ್ರ ಮಧ್ಯಸ್ಥ ಇವರುಗಳನ್ನು ಸಿಂಡಿಕೇಟ್ ಸದಸ್ಯತ್ವದಿಂದ ಬಿಡುಗಡೆಗೊಳಿಸಲಾದ ವಿಷಯವನ್ನು ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿ ಸದರಿಯವರು ತಮ್ಮ ಸದಸ್ಯತ್ವದ ಅವಧಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿ ದಾಖಲಿಸಲಾಯಿತು.

## <u>ಪ್ರಸ್ತಾವಿಕ</u>

1. ಮಾನ್ಯ ಕುಲಪತಿಗಳು ಉಡುಪಿ ಜಿಲ್ಲೆಯ ಬೆಳಪು ಗ್ರಾಮದಲ್ಲಿ ವಿಶ್ವವಿದ್ಯಾನಿಲಯದ ಅತ್ಯಾಧುನಿಕ ವಿಜ್ಞಾನ ಸಂಶೋಧನಾ ಕೇಂದ್ರಕ್ಕೆ ಸರ್ಕಾರವು ಅನುದಾನವನ್ನು ಮಂಜೂರಾತಿ ಮಾಡಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಈ ಕೇಂದ್ರವನ್ನು ಸ್ಥಾಪಿಸುವ ನಿಟ್ಟಿನಲ್ಲಿ ಮಂಜೂರಾದ ಪ್ರದೇಶದಲ್ಲಿ

ಸೌಲಭ್ಯಗಳನ್ನು ನಿರ್ಮಿಸುವ ಪ್ರಕ್ರಿಯೆಗೆ ಅನುವಾಗುವಂತೆ ನೀಲ ನಕ್ಷೆಯನ್ನು ಶೀಘ್ರ ತಯಾರಿಸಲು ಕಾರ್ಯಕಾರಿ ಅಭಿಯಂತರರಿಗೆ ಸೂಚಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

2. ಸಿಂಡಿಕೇಟು ಸದಸ್ಯರಾದ ಡಾ.ಈಶ್ವರ ಭಟ್ ಇವರ ಪ್ರಸ್ತಾವನೆಗಳನ್ನು ಚರ್ಚಿಸಲಾಯಿತು.

ಅ) ಪರೀಕ್ಷಕರು ಟ್ಯಾಕ್ಸಿ ಬಾಡಿಗೆಯನ್ನು ಕೋರಿ ಪೂರ್ವಾನುಮತಿ ಪಡೆದುಕೊಂಡಿದ್ದಲ್ಲಿ ಸ್ಥಳದಲ್ಲಿಯೇ ಅದನ್ನು ಪಾವತಿಸಲಾಗುತ್ತದೆ ಎಂದು ತಿಳಿಸಲಾಯಿತು.

ಆ) ಪರೀಕ್ಷಕರಿಗೆ ಕೆ.ಸಿ.ಎಸ್.ಆರ್. ನಿಯಮಾವಳಿಗಳಂತೆ ತುಟ್ಟಿಭತ್ತೆಯನ್ನು ಪಾವತಿಸಲಾಗುತ್ತಿದೆ; ಕೇಂದ್ರೀಯ ಮೌಲ್ಯಮಾಪನ ಹಾಗೂ ಇತರ ಪರೀಕ್ಷೆಗಳಿಗೆ ಭಿನ್ನ ತುಟ್ಟಿಭತ್ತೆಗಳಿವೆ ಎಂದು ತಿಳಿಸಲಾಯಿತು.

ಇ) ಪರೀಕ್ಷಕರಿಗೆ ಉಚಿತವಾಗಿ ಅತಿಥಿಗೃಹಗಳನ್ನು ನೀಡಲು ಸಾಧ್ಯವಾಗುವುದಿಲ್ಲ; ಆದರೆ ಬಾಡಿಗೆಯಲ್ಲಿ ರಿಯಾಯತಿಯನ್ನು ನೀಡಲಾಗುತ್ತಿದೆ ಎಂದು ತಿಳಿಸಲಾಯಿತು.

ಈ) ಅತಿಥಿಗೃಹಗಳಿಂದ ವಿದೇಶಿ ವಿದ್ಯಾರ್ಥಿಗಳನ್ನು ತೆರವುಗೊಳಿಸಿ ಹೆಚ್ಚಿನ ಕೊಠಡಿಗಳು ದೊರೆಯುವಂತೆ ಮಾಡಲು ಕ್ರಮಕೈಗೊಳ್ಳಲು ಕುಲಸಚಿವರಿಗೆ ತಿಳಿಸಲಾಯಿತು.

ಉ) ಡೀನರುಗಳಿಗೆ ಪ್ರತ್ಯೇಕ ಕೊಠಡಿ ನೀಡಲು ಸಾಧ್ಯವಿಲ್ಲವೆಂದು ತಿಳಿಸಲಾಯಿತು.

ಊ) ನಿವೃತ್ತ ಪ್ರಾಧ್ಯಾಪಕರುಗಳ ಸೇವೆಯನ್ನು ಅವರು 65 ವಯೋಮಿತಿಯನ್ನು ಮೀರದಿದ್ದಲ್ಲಿ ಮಾನ್ಯ ಕುಲಪತಿಗಳ ಪೂರ್ವಾನುಮತಿಯೊಂದಿಗೆ ಪರೀಕ್ಷಾ ಕಾರ್ಯಗಳಿಗೆ ಬಳಸಿಕೊಳ್ಳಲು ಸೂಚಿಸಲಾಯಿತು.

ಋ) ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಆರೋಗ್ಯ ಕೇಂದ್ರಕ್ಕೆ ಖಾಯಂ ವೈದ್ಯರೊಬ್ಬರ ನೇಮಕಾತಿಗಾಗಿ ಸರ್ಕಾರದೊಂದಿಗೆ ವ್ಯವಹರಿಸುತ್ತಿರುವುದಾಗಿ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು.

3. ವಿಶ್ವವಿದ್ಯಾನಿಲಯ ಅತಿಥಿಗೃಹಗಳ ಕೊಠಡಿ ದರವನ್ನು ದಿನಾಂಕ 20.04.2017ರಂದು ಅನ್ವಯಿಸಿ ಪರಿಷ್ಕರಿಸಿದ್ದು, BOE/BOS/Doctoral Committeeಗಳಿಗೆ ಬರುವ ಅತಿಥಿಗಳಿಗೆ ಮಾತ್ರ ಅನ್ವಯಿಸಿ ಈ ಕೆಳಗಿನಂತೆ ಕಡಿತಗೊಳಿಸುವಂತೆ ಸಭೆಯು ನಿರ್ಧರಿಸಿತು.

| ಕಚಿಡಿಣುಭಿಣಟಚಿಧಿ | Existing Rates Rs./day (w.e.f. 20.04.2017) | Revised Rates |
|---|---|---|
| Kaveri Guest House (Official) AC Room | 400.00 | 300.00 |
| Nethravathi Guest House Ordinary Room (Non AC) | 300.00 | 100.00 |

## I ನಡಾವಳಿಗಳ ದೃಢೀಕರಣ

1. ದಿನಾಂಕ 07.07.2017ರಂದು ನಡೆದ 2017ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಕೆಳಗಿನ ತಿದ್ದುಪಡಿಯೊಂದಿಗೆ ದೃಢೀಕರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.4:28(2017)

**ವಿಷಯ:** ವಿವಿಧ ರಾಜ್ಯಗಳ Bar Council ನಿಂದ ನೈಜತೆ ಪರಿಶೀಲನೆಗಾಗಿ ಬಂದಿರುವ LLB ಪದವಿ ದಾಖಲೆಗಳನ್ನು ಶುಲ್ಕ ರಹಿತವಾಗಿ ಪರಿಶೀಲಿಸಿ ನೀಡಿದ ಬಗ್ಗೆ.

**ನಿರ್ಣಯ:** ದಾಖಲೆಗಳನ್ನು ಶುಲ್ಕ ರಹಿತವಾಗಿ ಪರಿಶೀಲಿಸಿ ನೀಡಿರುವುದನ್ನು ಅನುಮೋದಿಸಲಾಯಿತು. ಕುಲಸಚಿವರು, ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯ, ನವದೆಹಲಿ ಇವರಿಗೆ ಪತ್ರ ಬರೆದು ನೈಜ್ಯತಾ ಪರಿಶೀಲನಾ ಶುಲ್ಕವನ್ನು ಆಯಾ Bar Councilನವರು ಮರುಭರಿಸಲು ನಿರ್ದೇಶಿಸುವಂತೆ ಮನವಿ ಸಲ್ಲಿಸಲು ನಿರ್ಣಯಿಸಲಾಯಿತು.

## II ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 03.05.2017 ಮತ್ತು ದಿನಾಂಕ 12.05.2017ರಂದು ನಡೆದ 2017ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

## III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.5:1(2017)

**ವಿಷಯ:** ಏಪ್ರಿಲ್/ಮೇ 2017ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪದವಿ / ಸ್ನಾತಕೋತ್ತರ ಪರೀಕ್ಷೆಗಳಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯಾರ್ಥಿಗಳ ಬಗ್ಗೆ ತನಿಖಾ ವರದಿ.

**ನಿರ್ಣಯ:** ಪರೀಕ್ಷಾ ಅವ್ಯವಹಾರ ತನಿಖಾ ಸಮಿತಿಯು ಸಲ್ಲಿಸಿರುವ ವರದಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.5:2(2017)

**ವಿಷಯ:** ತತ್ಕಾಲ್ ಮೂಲಕ ಪದವಿ ಪ್ರಮಾಣ ಪತ್ರ ಪಡೆಯಲು ನಿಗದಿಪಡಿಸಿರುವ ಶುಲ್ಕವನ್ನು ಕಡಿಮೆಗೊಳಿಸುವ ಬಗ್ಗೆ.

**ನಿರ್ಣಯ:** ತತ್ಕಾಲ್ ಮೂಲಕ ಪದವಿ ಪ್ರಮಾಣ ಪತ್ರ ಪಡೆಯಲು ನಿಗದಿಪಡಿಸಿರುವ ಶುಲ್ಕವನ್ನು ರೂ.1,000/- ಕಡಿಮೆಗೊಳಿಸಿ ರೂ.4,000/-ಕ್ಕೆ ನಿಗದಿಪಡಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟ್ ಸಾ.ಸ.5:3(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷರ ನೇಮಕಾತಿ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಗಣಿತಶಾಸ್ತ್ರ ಅಧ್ಯಯನ ವಿಭಾಗಕ್ಕೆ ಡಾ.ಕಿಶೋರಿ ಪಿ.ನಾರಾಯಣ್ಕರ್, ಸಹಾಯಕ ಪ್ರಾಧ್ಯಾಪಕರು ಇವರನ್ನು ದಿನಾಂಕ 01.08.2017 ರಿಂದ 31.12.2017ರ ವರೆಗೆ ಪ್ರಭಾರ ಅಧ್ಯಕ್ಷರಾಗಿ ನೇಮಕಾತಿ ಮಾಡುವ ಪ್ರಸ್ತಾವನೆಯನ್ನು ಅನಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.5:4(2017)

**ವಿಷಯ:** ಡಾ. ಮಂಜುನಾಥ ಪಟ್ಟಾಭಿ, ಪ್ರಾಧ್ಯಾಪಕರು, ವಸ್ತುವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರಿಗೆ ದಿನಾಂಕ 07.09.2017 ಮತ್ತು 08.09.2017ರ ವರೆಗೆ 'Scotland' ಇಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.5:5(2017)

**ವಿಷಯ:** ಚಿಕ್ಕ ಅಳುವಾರದಲ್ಲಿರುವ ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರಕ್ಕೆ 'ಕಾವೇರಿ ಗಂಗೋತ್ರಿ' ಅಥವಾ ಬೇರೆ ಯಾವುದಾದರೂ ಹೆಸರು ನಾಮಕರಣ ಮಾಡುವ ಬಗ್ಗೆ.

**ನಿರ್ಣಯ:** ಸದರಿ ವಿಷಯದ ಬಗ್ಗೆ ಸಭೆಯು ಸುದೀರ್ಘವಾಗಿ ಚರ್ಚಿಸಿ ಸ್ನಾತಕೋತ್ತರ ಕೇಂದ್ರಕ್ಕೆ 'ಜ್ಞಾನ ಗಂಗೋತ್ರಿ' ಎಂದು ನಾಮಕರಣ ಮಾಡುವುದಾಗಿ ನಿರ್ಣಯಿಸಲಾಯಿತು. ಅರ್ಥಪೂರ್ಣವಾದ ಹೆಸರನ್ನು ಸೂಚಿಸಿದ್ದಕ್ಕಾಗಿ ಮಾನ್ಯ ಸದಸ್ಯರಾದ ಡಾ. ಪುಷ್ಪಕುಟ್ಟಣ್ಣ ಇವರನ್ನು ಅಭಿನಂದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಸಾ.ಸ.5:6(2017)

**ವಿಷಯ:** ಅಂತರಾಷ್ಟ್ರೀಯ ವಿದ್ಯಾರ್ಥಿಗಳ ವಾಸ್ತವ್ಯಕ್ಕಾಗಿ – Venkat Residency ವಸತಿ ಸಮುಚ್ಛಯವನ್ನು ಲೈಸನ್ಸ್ ಫೀ ನೆಲೆಯಲ್ಲಿ ತೆಗೆದುಕೊಳ್ಳುವ ಬಗ್ಗೆ – ಘಟನೋತ್ತರ ಅನುಮೋದನೆಗಾಗಿ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು. ವಿಶ್ವವಿದ್ಯಾನಿಲಯ ಆವರಣದಲ್ಲಿರುವ ನೇತ್ರಾವತಿ ಅತಿಥಿ ಗೃಹದಲ್ಲಿ ವಾಸ್ತವ್ಯವಿರುವ ವಿದೇಶಿ ವಿದ್ಯಾರ್ಥಿಗಳನ್ನು ಶೀಘ್ರವಾಗಿ ವೆಂಕಟ್ ರೆಸಿಡೆನ್ಸಿಗೆ ಸ್ಥಳಾಂತರಿಸಲು ಕ್ರಮಕೈಗೊಳ್ಳುವಂತೆ ಕುಲಸಚಿವರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.5:7(2017)

**ವಿಷಯ:** ಏಪ್ರಿಲ್/ಮೇ 2017ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ವಿವಿಧ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳು – ದಂಡನೆಯನ್ನು ದೃಢಪಡಿಸುವ ಬಗ್ಗೆ.

**ನಿರ್ಣಯ:** ತನಿಖಾ ಸಮಿತಿಯ ಶಿಫಾರಸ್ಸಿನಂತೆ ಪ್ರಸ್ತಾಪಿಸಲಾದ ದಂಡನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.5:8(2017)

**ವಿಷಯ:** ಸ್ವಾಯತ್ತ ಕಾಲೇಜುಗಳ ವಾರ್ಷಿಕ ಪರಿಶೀಲನೆಯ ಕುರಿತು.

**ನಿರ್ಣಯ:** ಸ್ವಾಯತ್ತ ಕಾಲೇಜುಗಳ ಕುರಿತು ಸಮಿತಿ ನೀಡಿದ ವರದಿಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಯಿತು. ಸಮಿತಿಯು ಸ್ವಾಯತ್ತ ಕಾಲೇಜುಗಳ ಕಾರ್ಯಚಟುವಟಿಕೆಗಳ ಬಗ್ಗೆ ತೃಪ್ತಿಕರವಾದ ಅಭಿಪ್ರಾಯವನ್ನು ವ್ಯಕ್ತಪಡಿಸಿದನ್ನು ಗಮನಿಸಿತು. ಆದರೆ ಸಭೆಯು ಪರಿಶೀಲನಾ ಸಮಿತಿಗಳು ಕೆಲವು ಕಾಲೇಜುಗಳಲ್ಲಿ ಕಂಡು ಬಂದ ಲೋಪದೋಷಗಳನ್ನೂ ಉಲ್ಲೇಖಿಸಿದ್ದನ್ನು ಗಮನಿಸಿ ಆ ಕುರಿತು ಸಂಬಂಧಿಸಿದ ಕಾಲೇಜುಗಳಿಂದ ಅನುಸರಣಾ ವರದಿಯನ್ನು ಪಡೆದುಕೊಳ್ಳಲು ಕುಲಸಚಿವರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:9(2017)

**ವಿಷಯ:** ಶ್ರೀ ಗೋವಿಂದ ಮಟ್ಟಿ, ಹಿರಿಯ ಸಹಾಯಕರು, ಇವರು ವರ್ಗಾವಣೆಗೊಂಡ ಕಚೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗದಿರುವ ಬಗ್ಗೆ.

**ನಿರ್ಣಯ:** ಸದರಿ ಸಿಬ್ಬಂದಿಯು ಇದುವರೆಗೆ ಕರ್ತವ್ಯಕ್ಕೆ ಹಾಜರಾಗದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿತು. ಸಿಬ್ಬಂದಿಗೆ ಕರ್ತವ್ಯಕ್ಕೆ ಕೂಡಲೆ ಹಾಜರಾಗುವಂತೆ ಸೂಚಿಸಿ ಅಂತಿಮ ಜ್ಞಾಪನವನ್ನು ನೀಡಲು ಕುಲಸಚಿವರಿಗೆ ಸೂಚಿಸಲಾಯಿತು. ಅದರಂತೆ, ಸಿಬ್ಬಂದಿಯು ಕರ್ತವ್ಯಕ್ಕೆ ಹಾಜರಾಗಲು ವಿಫಲರಾದಲ್ಲಿ ಅವರನ್ನು ಸೇವೆಯಿಂದ ಕಡ್ಡಾಯ ನಿವೃತ್ತಿಗೊಳಿಸಲು ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:10(2017)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಪ್ರಾರಂಭಿಸಿರುವ ಹೊಸ ಕೋರ್ಸುಗಳಿಗೆ ಹೆಚ್ಚುವರಿ ಹುದ್ದೆಗಳ ಸೃಜನೆಯ ಬಗ್ಗೆ ರಚಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಹೆಚ್ಚುವರಿ ಹುದ್ದೆಗಳ ಸೃಜನೆಯ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:11(2017)

**ವಿಷಯ:** ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಪ್ರಾರಂಭಿಸಿರುವ ಹೊಸ ಕೋರ್ಸುಗಳಿಗೆ ಹೆಚ್ಚುವರಿ ಹುದ್ದೆಗಳ ಸೃಜನೆಯ ಬಗ್ಗೆ ರಚಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಹುದ್ದೆಗಳ ಸೃಜನೆಯ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:12(2017)

**ವಿಷಯ:** ದಿನಾಂಕ 01.01.2006 ರಿಂದ ಜಾರಿಗೊಂಡ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗೆ ಸಂಬಂಧಿಸಿದ ಅನುಶಾಸನದ ಕೆರಿಯರ್ ಎಡ್ವಾನ್ಸ್‌ಮೆಂಟ್ ಸ್ಕೀಂ ಪ್ರಕಾರ ವಿಶ್ವವಿದ್ಯಾನಿಲಯ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜುಗಳ ಬೋಧಕರಿಗೆ ಮುಂಬಡ್ತಿ – ಸ್ಕ್ರೀನಿಂಗ್ –ಕಂ– ಇವ್ಯಾಲ್ಯುವೇಶನ್ / ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಸ್ಕ್ರೀನಿಂಗ್–ಕಂ–ಇವ್ಯಾಲ್ಯುವೇಶನ್ / ಆಯ್ಕೆ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:13(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 33ನೇ ಘಟಿಕೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ನೀಡಲಾದ ಪದವಿ, ಸ್ನಾತಕೋತ್ತರ ಹಾಗೂ ಪಿಹೆಚ್.ಡಿ. ಪ್ರಮಾಣ ಪತ್ರಗಳಲ್ಲಿ ಮುದ್ರಣ ದೋಷಗಳ ಕುರಿತು.

**ನಿರ್ಣಯ:** ಈ ಕುರಿತು ಲೋಪವೆಸಗಿದ ಸದರಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಕಾರಣ ಕೇಳಿ ನೋಟೀಸನ್ನು ನೀಡಲು ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:14(2017)

**ವಿಷಯ:** ಕಿಂಗ್ಡಮ್ ವಿಶ್ವವಿದ್ಯಾನಿಲಯ, ಬಹ್ರೇನ್ ಇಲ್ಲಿ ಸಹ ಪ್ರಾಧ್ಯಾಪಕರು ಗ್ರೇಡ್ 4, ಹಂತ 6 ಹುದ್ದೆಗೆ ನೇಮಕಗೊಂಡಿರುವ ಡಾ. ಅಬ್ಬೋಕರ್ ಸಿದ್ದಿಕ್, ಸಹ ಪ್ರಾಧ್ಯಾಪಕರು, ವಾಣಿಜ್ಯ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರನ್ನು ವಿಶ್ವವಿದ್ಯನಿಲಯದ ಸೇವೆಯಿಂದ ಬಿಡುಗಡೆಗೊಳಿಸುವ ಹಾಗೂ ವಾಣಿಜ್ಯ ವಿಭಾಗದಲ್ಲಿನ ಹುದ್ದೆಯ ಹಕ್ಕುಸ್ವಾಮ್ಯವನ್ನು ಕಾಯ್ದಿರಿಸುವ ಬಗ್ಗೆ.

**ನಿರ್ಣಯ:** ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕಾನೂನು ಘಟಕದ ಅಭಿಪ್ರಾಯ ಪಡೆದು ಸೂಕ್ತ ನಿರ್ಧಾರ ಕೈಗೊಳ್ಳಲು ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:15(2017)

**ವಿಷಯ:** ಡಾ. ವಿ. ರವೀಂದ್ರಾಚಾರಿ, ಪ್ರಾಧ್ಯಾಪಕರು, ಭೌತಶಾಸ್ತ್ರ ವಿಭಾಗ, ಇವರಿಗೆ ದಿನಾಂಕ 10.08.2017 ರಿಂದ 15.08.2017ರ ವರೆಗೆ MARA, Malaysia ಇಲ್ಲಿ ಸಂಶೋಧನೆ ಕಾರ್ಯ ನಡೆಸುವ ಸಲುವಾಗಿ ಭೇಟಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಸಾ.ಸ.5:16(2017)

**ವಿಷಯ:** ಶ್ರೀ ಹರೀಶ್ ಆಚಾರ್, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆಗಳು

**ನಿರ್ಣಯ:** ಅ) ಪ್ರಸ್ತಾವನೆ ಕ್ರ.ಸಂ.1: ಮೌಲ್ಯಮಾಪನದಲ್ಲಿ ಕಂಡು ಬಂದಿರುವ ಲೋಪ ದೋಷಗಳ ಕುರಿತು ಹೆಚ್ಚಿನ ವಿಚಾರಣೆ ಮಾಡುವ ನಿಟ್ಟಿನಲ್ಲಿ ಆ ವಿಷಯಗಳಿಗೆ ಸಂಬಂಧಿಸಿದಂತೆ ಮೂರು ವರ್ಷಗಳ ಮೌಲ್ಯಮಾಪನ ವರದಿಗಳನ್ನು ತರಿಸಿಕೊಂಡು ಮುಂದಿನ ಕ್ರಮಕೈಗೊಳ್ಳಲು ನಿರ್ಣಯಿಸಲಾಯಿತು.

ಆ) ಪ್ರಸ್ತಾವನೆ ಕ್ರ.ಸಂ.2: ಎಫ್.ಎಂ.ಕೆ.ಎಂ.ಸಿ ಕಾಲೇಜು, ಮಡಿಕೇರಿ ಇಲ್ಲಿ ಪ್ಲೇಸ್‌ಮೆಂಟ್‌ಗೆ ಸಂಬಂಧಿಸಿದಂತೆ, ಕಾರ್ಯಸೂಚಿ ಸಂ. ಸಿಬ್ಬಂದಿ ಸಾ.ಸ.5:20(2017)ರಲ್ಲಿ ಸದರಿ ವಿಷಯದ ಬಗ್ಗೆ ಕ್ರಮಕೈಗೊಳ್ಳಲಾಗಿದೆ.

ಇ) ಪ್ರಸ್ತಾವನೆ ಕ್ರ.ಸಂ.3: ಹಾಸ್ಟೇಲ್‌ಗಳಲ್ಲಿ ಪ್ರವೇಶಾತಿ ಕೋರಿದ ಹೆಚ್ಚಿನ ವಿದ್ಯಾರ್ಥಿಗಳಿಗೆ ಕೊಠಡಿಗಳನ್ನು ನೀಡಲಾಗಿದೆ; ಹೊಸ ಕಟ್ಟಡಗಳು ನಿರ್ಮಾಣಗೊಳ್ಳುತ್ತಿವೆ; ಇನ್ನು ಮುಂದೆ ಸೀಟು ಹಂಚಿಕೆ ಮಾಡುವಾಗ ಮಾನ್ಯ ಸದಸ್ಯರ ಸಲಹೆಗಳನ್ನು ಗಮನದಲಿಟ್ಟುಕೊಂಡು ಕ್ರಮಕೈಗೊಳ್ಳಲು ಹಾಸ್ಟೇಲ್ ವಾರ್ಡನ್‌ಗಳಿಗೆ ಸೂಚಿಸಲಾಗುವುದು ಎಂದು ಮಾನ್ಯ ಕುಲಪತಿಗಳು ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ:** ಹವಿ ಸಾ.ಸ.5:17(2017)

**ವಿಷಯ:** 2016–17ನೇ ಸಾಲಿನ ವಾರ್ಷಿಕ ಲೆಕ್ಕ ಪತ್ರಗಳ ಅನುಮೋದನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ ಸಾ.ಸ.5:18(2017)

**ವಿಷಯ:** ಶ್ರೀ ನಿಂಗಮಂಜಪ್ಪ ಎಸ್ ಇವರ ಎಂ.ಟೆಕ್ (ಸಿಸ್ಟಂ ಅನಾಲಿಸಿಸ್ ಆಂಡ್ ಕಂಪ್ಯೂಟರ್ ಅಪ್ಲಿಕೇಶನ್ಸ್) ಸ್ನಾತಕೋತ್ತರ ಪದವಿಯ ಅಂಕಪಟ್ಟಿಯ/ಪದವಿ ಪ್ರಮಾಣ ಪತ್ರ ಇತ್ಯಾದಿ ನೈಜತೆ ಪರಿಶೀಲನೆ ಬಗ್ಗೆ.

**ನಿರ್ಣಯ:** The Syndicate has viewed the serious lapse and dereliction of duty on the part of Prof.Yadapadithaya as Registrar (Evaluation) and expressed its strong displeasure and also resolved to warn him for the serious lapse on his part and to be very deligent in his duties at least in future.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:19(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಬೋಧಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿ ಜಾರಿಯಲ್ಲಿರುವ ಪರಿನಿಯಮ "Statute relating to conduct of Interview for Appointment and Promotion of Teachers and other Academic Staff in the University and Constituent College"ಕ್ಕೆ ತಿದ್ದುಪಡಿ ಮಾಡುವ ಬಗ್ಗೆ.

**ನಿರ್ಣಯ:** ಕರಡು ತಿದ್ದುಪಡಿ ಅನುಶಾಸನವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:20(2017)

**ವಿಷಯ:** ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ನಡೆದ ಕ್ಯಾಂಪಸ್ ಸಂದರ್ಶನದಲ್ಲಿ ಉದ್ಯೋಗದ ಆಮಿಷವೊಡ್ಡಿ ವಂಚನೆ ನಡೆಸಿದ ಬಗ್ಗೆ – ವಿಚಾರಣೆಯ ವರದಿ ಕುರಿತು.

ನಿರ್ಣಯ: ಸಿಂಡಿಕೇಟು ಸಭೆಯು ಸಮಿತಿ ನೀಡಿದ ವರದಿಯನ್ನು ವಿಸ್ಕೃತವಾಗಿ ಚರ್ಚಿಸಿತು. ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿದ ನಂತರ ಅಕ್ಸೆಂಚರ್ ಕಂಪನಿಯಲ್ಲಿ ಅವರ ನೇಮಕಾತಿ ಕುರಿತಂತೆ ಮೇಲುಸ್ತುವಾರಿಯನ್ನು ನೋಡಿಕೊಳ್ಳಲು ತೀವ್ರತೆರನಾದ ಅಲಕ್ಷ್ಯ ಮತ್ತು ಅನಾಸಕ್ತಿಯನ್ನು ತೋರಿಸಿರುವುದಕ್ಕಾಗಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಪಾರ್ವತಿ ಅಪ್ಪಯ್ಯ ಮತ್ತು ಪ್ಲೇಸ್ ಮೆಂಟ್ ಕೇಂದ್ರದ ಸಂಯೋಜಕರಾದ ಡಾ.ಕುಮಾರ ಸ್ವಾಮಿಯವರ ವರ್ತನೆಯನ್ನು ಗಂಭೀರವಾಗಿ ಪರಿಗಣಿಸಿತು. ಅಲ್ಲದೆ ಸಮಿತಿಯ ವರದಿಯಲ್ಲಿ ನಮೂದಿಸಲಾದ ಅಂಶಗಳ ಬಗ್ಗೆ ಇನ್ನೂ ವಿಸ್ತೃತವಾದ ವಿಚಾರಣೆಯನ್ನು ನಡೆಸಲು ಹಾಗೂ ಈ ವಿಚಾರಣೆಯನ್ನು ಓರ್ವ ನಿವೃತ್ತ ನ್ಯಾಯಾಧೀಶರಿಂದ ನಡೆಸಲು ನಿರ್ಣಯಿಸಿತು. ವಿಚಾರಣೆ ಮುಗಿಯುವವರೆಗೂ ಡಾ.ಪಾರ್ವತಿ ಅಪ್ಪಯ್ಯ ಮತ್ತು ಡಾ.ಕುಮಾರ ಸ್ವಾಮಿ ಅವರುಗಳನ್ನು ಕಡ್ಡಾಯ ರಜೆಯಲ್ಲಿ ಕಳುಹಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:21(2017)

**ವಿಷಯ:** ಡಾ. ಆರ್. ಶಂಕರ್, ಪ್ರಾಧ್ಯಾಪಕರು, ಸಾಗರ ಭೂವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ, ಇವರಿಗೆ ದಿನಾಂಕ 21.08.2017 ರಿಂದ 29.08.2017ರ ವರೆಗೆ Nice, France ಇಲ್ಲಿಗೆ ಭೇಟಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:22(2017)

**ವಿಷಯ:** ಡಾ. ಮಂಜುನಾಥ ಪಟ್ಟಾಭಿ, ಪ್ರಾಧ್ಯಾಪಕರು, ಹಾಗೂ ಅಧ್ಯಕ್ಷರು, ವಸ್ತುವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರಿಗೆ ದಿನಾಂಕ 16.10.2017 ರಿಂದ 04.11.2017ರ ವರೆಗೆ The University of Kelaniya, Sri Lanka ಇಲ್ಲಿ ನಡೆಯುವ Symposium ನಲ್ಲಿ Key note Address ನೀಡುವ ಸಲುವಾಗಿ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:23(2017)

**ವಿಷಯ:** ಡಾ. ಎಸ್. ಎಂ. ಧರ್ಮಪ್ರಕಾಶ್, ಪ್ರಾಧ್ಯಾಪಕರು, ಭೌತಶಾಸ್ತ್ರ ವಿಭಾಗ, ಹಾಗೂ ನಿರ್ದೇಶಕರು, ದೂರಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ, ಇವರಿಗೆ ದಿನಾಂಕ 27.08.2017 ರಿಂದ 01.09.2017ರ ವರೆಗೆ International Confrerence on Advanced Materials, Kyoto University, Kyoto, Japan ಇಲ್ಲಿ ಸಂಶೋಧನೆ ಕಾರ್ಯ ನಡೆಸುವ ಸಲುವಾಗಿ ಭೇಟಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:24(2017)

**ವಿಷಯ:** Complaint against Dr. Shamasundar J., Assistant Professor, Department of Human Consciousness and Yogic Sciences, Mangalore University

**ನಿರ್ಣಯ:** The Syndicate discussed the matter at length and took a serious view of the acts of indiscipline indulged in by Dr.Shyamsundar.J which has resulted in affecting the career of students and tarnishing the image of the University and it resolved to suspend him from the duty forthwith, pending departmental enquiry.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:25(2017)

**ವಿಷಯ:** ಡಾ. ಚಂದ್ರಶೇಖರ ಗಜಾನನ ಜೋಶಿ, ಸಹಾಯಕ ಪ್ರಾಧ್ಯಾಪಕರು, ಜೀವರಸಾಯನಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ, ಇವರಿಗೆ ಖಅಒಖ ಅಂತರಾಷ್ಟ್ರೀಯ ಫೆಲೋಶಿಪ್ ಪಡೆಯಲು ವ್ಯಾಸಂಗ ರಜೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:26(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ನಿರ್ವಹಿಸಲು ಆದೇಶಿಸಿರುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:27(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಬೋಧಕೇತರ ಹುದ್ದೆಗಳ ನೇರನೇಮಕಾತಿಗೆ ಕರಡು ಅನುಶಾಸನ ಅನುಮೋದನೆ ಬಗ್ಗೆ.

**ನಿರ್ಣಯ:** ಕರಡು ಅನುಶಾಸನವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:28(2017)

**ವಿಷಯ:** ಡಾ. ಎಸ್. ಎಂ. ಧರ್ಮಪ್ರಕಾಶ್, ಪ್ರಾಧ್ಯಾಪಕರು ಹಾಗೂ ನಿರ್ದೇಶಕರು, ದೂರಶಿಕ್ಷಣ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ, ಇವರಿಗೆ ದಿನಾಂಕ 27.08.2017 ರಿಂದ 01.09.2017ರ ವರೆಗೆ "University of Kyoto, Japan ಇಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:29(2017)

**ವಿಷಯ:** ಡಾ. ಎಂ. ಎಸ್. ಮುಸ್ತಾಕ್, ಸಹಾಯಕ ಪ್ರಾಧ್ಯಾಪಕ, ಆನ್ವಯಿಕ ಪ್ರಾಣಿಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರಿಗೆ ದಿನಾಂಕ 17.10.2017 ರಿಂದ 21.10.2017ರ ಅಮೇರಿಕಾದಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಪತ್ರಿಕೆ ಮಂಡಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಸಾ.ಸ.5:30(2017)

**ವಿಷಯ:** ಪುತ್ತೂರು ತಾಲೂಕಿನ ನೆಲ್ಯಾಡಿ ಗ್ರಾಮದ ಸರ್ವೆ ನಂ. 186/1 ರಲ್ಲಿ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಮಂಜೂರಾದ 24.40 ಎಕರೆ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಮಾನ್ಯ ಕುಲಪತಿಗಳು, ನೆಲ್ಯಾಡಿ ಗ್ರಾಮದಲ್ಲಿ ವಿಶ್ವವಿದ್ಯಾನಿಲಯಕ್ಕೆ ಮಂಜೂರಾದ ಪ್ರದೇಶಕ್ಕೆ ಸಂಬಂದಿಸಿದಂತೆ, ನೀಲ ನಕ್ಷೆಯನ್ನು ತಯಾರಿಸಿ ಅದಕ್ಕೆ ಪೂರಕವಾಗಿ ಕ್ರಮಕೈಗೊಳ್ಳುವುದಾಗಿ ತಿಳಿಸಿದರು. ಈ ಪ್ರದೇಶದಲ್ಲಿ ಸ್ಥಳೀಯ ಜನರಿಗೆ, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವಿಶ್ವವಿದ್ಯಾನಿಲಯದ ಘಟಕ ಕಾಲೇಜಾಗಿ ಪ್ರಥಮ ದರ್ಜೆ ಕಾಲೇಜನ್ನು ಸ್ಥಾಪಿಸಲು ಉದೇಶಿಸಿದ್ದು ಇದರ ಶಂಕು ಸ್ಥಾಪನೆಗೆ ಮಾನ್ಯ ಮುಖ್ಯ ಮಂತ್ರಿಗಳನ್ನು ಆಹ್ವಾನಿಸುವ ಇರಾದೆಯನ್ನು ವ್ಯಕ್ತಪಡಿಸಿದರು. ಈ ನಿಟ್ಟಿನಲ್ಲಿ ಕ್ರಮಕೈಗೊಳ್ಳಲು ಶ್ರೀ ವಿಜಯ ಕುಮಾರ್ ಸೊರಕೆ, ಮಾನ್ಯ ಸಿಂಡಿಕೇಟು ಸದಸ್ಯರು ಇವರಿಗೆ ತಿಳಿಸಿದರು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.5:31(2017)

**ವಿಷಯ:** ಶೈಕ್ಷಣಿಕ ವರ್ಷ 2017–18ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೊಮಾ/ ಸರ್ಟಿಫಿಕೇಟ್ ಕೋರ್ಸುಗಳ ಪರೀಕ್ಷಾ ಶುಲ್ಕಗಳನ್ನು ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಸಾ.ಸ.5:32(2017)

**ವಿಷಯ:** Massive Open Online Courses / Open Education Resources ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ ಸಾ.ಸ.5:33(2017)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಸರ್ಕಾರ ಅನುಮೋದನೆ ನೀಡಿರುವ ಹುದ್ದೆಗಳನ್ನು ಭರ್ತಿಗೊಳಿಸುವ ಬಗ್ಗೆ ಹಾಗೂ ಆದ್ಯತೆಯ ನೆಲೆಯಲ್ಲಿ ಹುದ್ದೆಗಳನ್ನು redeployment ಮೂಲಕ ವರ್ಗಾಯಿಸಲು ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ರೋಸ್ಟರ್ ಬಿಂದುಗಳ ಪ್ರಕಾರ ಹುದ್ದೆಗಳ ಮೀಸಲಾತಿಯನ್ನು ವರ್ಗೀಕರಿಸುವ ಅಧಿಕಾರವನ್ನು ಮಾನ್ಯ ಕುಲಪತಿಯವರಿಗೆ ನೀಡಲಾಯಿತು.

**ಸಭೆಯಲ್ಲಿ ಹೆಚ್ಚುವರಿಯಾಗಿ ಪ್ರಸ್ತಾಪಿಸಲಾದ ವಿಷಯ:**

1. ಸಿಂಡಿಕೇಟು ಸಭೆಯು ಮಂಗಳೂರು ವಿಶ್ವವಿದ್ಯಾನಿಲಯದ ವಿಭಾಗಗಳಲ್ಲಿ ನಿಯೋಜನೆಯ ಮೇರೆಗೆ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಕುರಿತು ಚರ್ಚಿಸಿತು. ವಿಶ್ವವಿದ್ಯಾನಿಲಯದ ಕೆಲವು ವಿಭಾಗಗಳಲ್ಲಿ ಶೈಕ್ಷಣಿಕವಾಗಿ ಹೆಚ್ಚಿನ ಕಾರ್ಯಭಾರವಿದ್ದಾಗ ಹಾಗೂ ಖಾಯಂ ಉಪನ್ಯಾಸಕರ ಸಂಖ್ಯೆಯು ಕಡಿಮೆಯಿರುವ ಸಂದರ್ಭದಲ್ಲಿ ವಿಶ್ವವಿದ್ಯಾನಿಲಯವು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಿಂದ ಉಪನ್ಯಾಸಕರನ್ನು ವಿಶ್ವವಿದ್ಯಾನಿಲಯಕ್ಕೆ ನಿಯೋಜನೆ ಮೇರೆಗೆ ನೇಮಕ ಮಾಡುತ್ತಿದೆ. ಆದರೆ ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡ ಉಪನ್ಯಾಸಕರು ತಮ್ಮ ಸೇವೆಯನ್ನು ಸಂಬಂಧಿತ ವಿಭಾಗಗಳಲ್ಲಿ ಪೂರ್ಣ ಪ್ರಮಾಣದಲ್ಲಿ ನೀಡಲು ಸಾಧ್ಯವಾಗುತ್ತಿಲ್ಲ ಅಥವಾ ಅವರ ಸೇವೆಯನ್ನು ವಿಭಾಗಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳುತ್ತಿಲ್ಲ. ಈ ಹಿನ್ನೆಲೆಯಲ್ಲಿ ಡಾ. ವಜೀದಾ ಬಾನೋ, ಅರ್ಥಶಾಸ್ತ್ರ ವಿಭಾಗ, ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರ ನಿಯೋಜನೆಯ ಕುರಿತು ಚರ್ಚಿಸಲಾಯಿತು. ಅವರು ದಿನಾಂಕ 16.03.2015 ಅಪರಾಹ್ನದಿಂದ ಅರ್ಥಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅವರ ಪತಿಯು ವಿಶ್ವವಿದ್ಯಾನಿಲಯದಲ್ಲಿ ಕುಲಸಚಿವ (ಪರೀಕ್ಷಾಂಗ) ಹುದ್ದೆಯಲ್ಲಿ ಅತ್ಯಂತ ಜವಾಬ್ದಾರಿಯುತ ಕಾರ್ಯನಿರ್ವಹಿಸುತ್ತಿದ್ದು, ಪತ್ನಿಯು ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು, ಮಡಿಕೇರಿ ಕಾಲೇಜಿನಲ್ಲಿ ನೇಮಕಗೊಂಡಿರುವುದರಿಂದ, ಅವರ ಕೌಟುಂಬಿಕ ವಿಚಾರಗಳಿಗೆ ಹೆಚ್ಚಿನ ಗಮನವನ್ನು ವಹಿಸಲಾಗುತ್ತಿಲ್ಲ ಎಂಬುದನ್ನು ಗಮನಿಸಿತು. ಸರ್ಕಾರದ ವರ್ಗಾವಣೆ ನಿಯಮಾವಳಿಯ ಪ್ರಕಾರ ಪತಿ ಪತ್ನಿಯವರು ಸಾಧ್ಯವಾದಷ್ಟು ಮಟ್ಟಿಗೆ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಅವಕಾಶವನ್ನು ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ ಡಾ. ವಜೀದಾ ಬಾನೋ, ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರನ್ನು ಹುದ್ದೆಯೊಂದಿಗೆ ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿಗೆ ತಕ್ಷಣ ಜಾರಿಗೆ ಬರುವಂತೆ ವರ್ಗಾಯಿಸಲು ಸಿಂಡಿಕೇಟು ಸಭೆಯು ನಿರ್ಣಯಿಸಿತು.

ಮಾನ್ಯ ಕುಲಪತಿಯವರು ಸದಸ್ಯರುಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು |